**ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ**
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ರಾಜ್ಯಸಭಾ ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ     ದಿನಾಂಕ : DATE : 19/11/20

ರಾಜ್ಯಸಭೆಗೆ ಅವಿರೋಧ ಆಯ್ಕೆ ಸಾಧ್ಯತೆ

# ನಾರಾಯಣ್ ನಾಮಪತ್ರ ಸಲ್ಲಿಕೆ

**▪ ವಿಕ ಸುದ್ದಿಲೋಕ** ಬೆಂಗಳೂರು 19/11

ಅಶೋಕ್ ಗಸ್ತಿ ನಿಧನದಿಂದ ತೆರವಾದ ರಾಜ್ಯಸಭಾ ಸ್ಥಾನಕ್ಕೆ ಬಿಜೆಪಿ ಅಭ್ಯರ್ಥಿಯಾಗಿ ಕೆ.ನಾರಾಯಣ್ ಅವರು ಬುಧವಾರ ನಾಮಪತ್ರ ಸಲ್ಲಿಸಿದರು. ಪ್ರತಿಪಕ್ಷಗಳಿಂದ ಯಾವುದೇ ನಾಮಪತ್ರಗಳು ಸಲ್ಲಿಕೆಯಾಗಿಲ್ಲ. ಈ ಮಧ್ಯೆ, ಪಕ್ಷೇತರ ಅಭ್ಯರ್ಥಿಯಾಗಿ ಸುಧಾಕರ್ ಎಂಬುವವರು ನಾಮಪತ್ರ ಸಲ್ಲಿಸಿದ್ದಾರೆ. ಆದರೆ, ಈ ನಾಮಪತ್ರಕ್ಕೆ ಯಾರೂ ಸೂಚಕರಿಲ್ಲ.



ಬಿಜೆಪಿ ರಾಜ್ಯಾಧ್ಯಕ್ಷ ನಳೀನ ಕುಮಾರ್ ಕಟೀಲ್, ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್ ಈಶ್ವರಪ್ಪ, ತೋಟಗಾರಿಕೆ ಸಚಿವ ನಾರಾಯಣಗೌಡ, ಶಾಸಕ ಸುನೀಲ್ ಕುಮಾರ್ ಅವರ ಸಮ್ಮುಖದಲ್ಲಿ ಚುನಾವಣಾಧಿಕಾರಿ ಎಂ.ಕೆ.ವಿಶಾಲಾಕ್ಷಿ ಅವರಿಗೆ ನಾರಾಯಣ್ ನಾಮಪತ್ರ ಸಲ್ಲಿಸಿದರು. ಡಿಸೆಂಬರ್ 1 ರಂದು ನಿಗದಿಯಾಗಿರುವ ಚುನಾವಣೆಗೆ ನಾರಾಯಣ್ ಅವರದು ಏಕೈಕ ನಾಮಪತ್ರವಾಗಿದೆ. ಹೀಗಾಗಿ ಅವಿರೋಧ ಆಯ್ಕೆ ಹಾದಿ ಸುಗಮವಾಗಿದೆ. ನಾಮಪತ್ರ ಸಲ್ಲಿಕೆಗೆ ಬುಧವಾರವೇ ಕಡೆಯ ದಿನವಾಗಿತ್ತು, ಗುರುವಾರ ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು ಹಿಂತೆಗೆದುಕೊಳ್ಳಲು 23 ಕಡೆಯ ದಿನವಾಗಿದೆ. ಸೋಮವಾರ (ನ.23)ವೇ ಆಯ್ಕೆ ಘೋಷಣೆಯಾಗುವ ಸಾಧ್ಯತೆಗಳಿವೆ. ಇದಕ್ಕೂ ಮುನ್ನ ರಾಜ್ಯ ಬಿಜೆಪಿ ಕಚೇರಿಗೆ ಭೇಟಿ ನೀಡಿದ್ದ ನಾರಾಯಣ್ ಅವರಿಗೆ ರಾಜ್ಯಾಧ್ಯಕ್ಷ ನಳೀನ್‌ಕುಮಾರ ಕಟೀಲ್, ಅವರು ಬಿ ಫಾರಂ ವಿತರಿಸಿದರು. ಶಾಸಕ ಚಂದ್ರಪ್ಪ ಮತ್ತಿತರರು ಹಾಜರಿದ್ದರು.